<u>**ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಸೇಡಂ.**</u>

ಸಿ.ಸಿ. ನಂಃ 784/2017 ಸಿಡಬ್ಲ್ಯೂ: 1 ಪಿಡಬ್ಲ್ಯೂ: 1

ಪ್ರಮಾಣವಚನ ಬೋಧಿಸಲಾಯಿತು ದಿಃ 29-09-2025

ಹೆಸರು : ಚಂದ್ರಕಾಂತ

ತಂದೆ ಹೆಸರು : ವಿಶ್ವನಾಥ

ವಯಸ್ಸು : 40 ವರ್ಷ

ಉದ್ಯೋಗ : ಕೂಲಿ ಕೆಲಸ

ವಾಸಸ್ಥಳ : ಮಧೋಳ್

**:ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ:**

ಚಾಸಾ 2 ರವರು ನನಗೆ ಪರಿಚಯವಿಲ್ಲ. ನ್ಯಾಯಾಲಯದ ಮುಂದೆ ಇರುವ ಆರೋಪಿತರು ನನಗೆ ಗೊತ್ತಿಲ್ಲ.

ನನಗೆ ಈ ಪ್ರಕರಣದ ಬಗ್ಗೆ ಯಾವುದೇ ರೀತಿಯ ಮಾಹಿತಿ ಇರುವುದಿಲ್ಲ. ಪೋಲೀಸರು ನಮ್ಮ ಸಮಕ್ಷಮ ಯಾವುದೇ ರೀತಿಯ ಪಂಚನಾಮೆಗಳು ಮಾಡಿರುವುದಿಲ್ಲ. ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿ ಸದರಿ ದಾಖಲಾತಿಯು ಜಪ್ತಿ ಪಂಚನಾಮೆ ಆಗಿದ್ದು, ಸಾಕ್ಷಿಯು ಸದರಿ ದಾಖಲಾತಿ ನೋಡಿ ಗುರುತಿಸಿರುವುದರಿಂದ ಅದನ್ನು ನಿಪಿ-1 ಎಂದು ಗುರುತಿಸಲಾಗಿದೆ ಹಾಗು ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ಆದರೇ ನಿಪಿ-1 ರಲ್ಲಿರುವ ವಿಷಯಗಳು ನನಗೆ ಗೊತ್ತಿರುವುದಿಲ್ಲ.

**(ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ವಾಟೀಸವಾಲಿಗೆ ಅನುಮತಿ ಕೋರಿರುತ್ತಾರೆ, ಅನುಮತಿ ನೀಡಲಾಯಿತು)**

<u>**ವಾಟೀಸವಾಲುಃ**</u> ಮಾನ್ಯ ಸ.ಸ.ಅ ರವರಿಂದ:

ದಿಃ23-11-2011 ರಂದು ಮಧ್ಯಹ್ನ 02-00 ರಿಂದ 03-00 ಗಂಟೆಯ ವೆರೆಗೆ ಘಟನಾ ಸ್ಥಳಕ್ಕೆ ಹೋಗಿ ಪೋಲೀಸರು ದಾಳಿ ಮಾಡಿ ಆರೋಪಿಯ ವಶದಿಂದ ತಲಾ ಒಂದು ಚೀಲದಿಂದ 40 ಕಲಬೆರಕೆ ಸೇಂದಿ ಪಾಕೇಟುಗಳನ್ನು ಹೀಗೆ ಎರಡು ಚೀಲಗಳಲ್ಲಿ ಒಟ್ಟು 80 ಸೇಂದಿ ಪಾಕೇಟುಗಳನ್ನು ನಮ್ಮ ಸಮಕ್ಷಮ ಜಪ್ತಿ ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಿಲ್ಲ. ಅದೇ ರೀತಿ ಮೂರು ಕೆ ಜಿ ಯಷ್ಟು ಸಿ ಎಚ್ ಪೌಡರನ್ನು

ವಶಕ್ಕೆ ಪಡೆದುಕೊಂಡಿರುತ್ತಾರೆ ಎಂದರೆ ಸರಿಯಿಲ್ಲ. ಅದರಲ್ಲಿ 1 ಲೀ ಸೇಂದಿ ಹಾಗೂ 50 ಗ್ರಾಂ ಸಿ ಎಚ್ ಪೌಡರನ್ನು ರಾಸಾಯನಿಕ ಪರೀಕ್ಷೆ ಕುರಿತು ತೆಗೆದುಕೊಂಡು ಸೀಲು ಮಾಡಿದ್ದಾರೆ ಎಂದರೆ ಸರಿಯಿಲ್ಲ.

**ಪಾಟೀಸವಾಲುಃ** ಆರೋಪಿ ಪರ ವಕೀಲರಿಂದ: ವಕೀಲರು ಪಾಟೀಸವಾಲು ಇರುವುದಿಲ್ಲವೆಂದು ತಿಳಿಸಿರುತ್ತಾರೆ.

ಮರುವಿಚಾರಣೆಃ ಇಲ್ಲ

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ. ಹೇ. ಕೇ. ಸರಿ. ಇದೆ.**

**ಪ್ರ. ದ. ನ್ಯಾ. ದಂ. ಸೇಡಂ.**